**ದಿನಾಂಕ: 14.06.2018ರಂದು ಪೂರ್ವಾಹ್ನ 11.30 ಗಂಟೆಗೆ ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳೊಂದಿಗೆ ಜರುಗಿದ ಸಭೆಯ ನಡವಳಿಗಳು :**

ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಪಟ್ಟಿಯನ್ನು ಇದರೊಂದಿಗೆ ಲಗತ್ತಿಸಿದೆ.

ಪ್ರಥಮವಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ಸಭೆಯಲ್ಲಿ ಹಾಜರಿದ್ದ ಸನ್ಮಾನ್ಯ ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು, ಮಾನ್ಯ ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರರು, ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳನ್ನು ಸಭೆಗೆ ಸ್ವಾಗತಿಸಿದರು. ಮಾನ್ಯ ಮುಖ್ಯಮಂತ್ರಿಯವರು ಸಭೆಯ ಅಧ್ಯಕ್ಷತೆಯನ್ನು ವಹಿಸಿಕೊಳ್ಳುವಂತೆ ಕೋರುತ್ತಾ, ಇಂದಿನ ಸಭೆಯಲ್ಲಿ ಮುಖ್ಯವಾಗಿ ರಾಜ್ಯದ ಋತುಮಾನ ಸ್ಥಿತಿ, ಮಳೆಬೆಳೆ ಪರಿಸ್ಥಿತಿ ಮತ್ತು ಇನ್ನಿತರ ಪ್ರಮುಖ ವಿಷಯಗಳ ಕುರಿತು ಚರ್ಚೆ ನಡೆಯಲಿದೆ. ಸನ್ಮಾನ್ಯ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳು ತಮ್ಮ ಅಮೂಲ್ಯ ಸಲಹೆ ಮತ್ತು ಸಂದೇಶಗಳನ್ನು ನೀಡಲಿದ್ದು, ಸಭೆಯನ್ನು ಉದ್ದೇಶಿಸಿ ಪ್ರಸ್ತಾಪಿಸುವ ವಿಷಯಗಳ ಬಗ್ಗೆ ಅಧಿಕಾರಿಗಳು ತಮ್ಮ ಪ್ರತಿಕ್ರಿಯೆಯನ್ನು ನೀಡುವಂತೆ ಕೋರುತ್ತಾ, ಸನ್ಮಾನ್ಯ ಮುಖ್ಯಮಂತ್ರಿಯವರು ಸಭೆಯನ್ನುದ್ದೇಶಿಸಿ ಮಾತನಾಡುಂತೆ ಕೋರಿದರು.

ಸನ್ಮಾನ್ಯ ಮುಖ್ಯಮಂತ್ರಿಯವರು ಅಧ್ಯಕ್ಷ ಭಾಷಣ ಮಾಡುತ್ತಾ, ಸಭೆಯನ್ನು ಉದ್ದೇಶಿಸಿ ಸಭೆಯಲ್ಲಿ ಹಾಜರಿದ್ದ ಸನ್ಮಾನ್ಯ ಉಪಮುಖ್ಯಮಂತ್ರಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಮತ್ತು ಎಲ್ಲಾ ಅಧಿಕಾರಿ ವೃಂದದವರಿಗೆ ಹಾಗೂ ಮಾಧ್ಯಮದವರಿಗೆ ಸ್ವಾಗತಿಸಿದರು. ಮುಂದುವರೆದು, ನೂತನ ಸರ್ಕಾರದ ಕಾರ್ಯಕ್ರಮಗಳು ಅತ್ಯಂತ ಪರಿಣಾಮಕಾರಿಯಾಗಿ ಜಾರಿಗೆ ಬರಬೇಕಾದರೆ ಹಾಗೂ ಈ ಕಾರ್ಯಕ್ರಮಗಳನ್ನು ಜನಸಾಮಾನ್ಯರಿಗೆ ತಲುಪಿಸುವ ನಿಟ್ಟಿನಲ್ಲಿ ಪ್ರಮುಖ ಹುದ್ದೆಗಳಲ್ಲಿ ಇರುವಂತಹ ಎಲ್ಲಾ ಹಿರಿಯ ಅಧಿಕಾರಿಗಳಿಗೆ ಸರ್ಕಾರದ ಪರವಾಗಿ ಆಹ್ವಾನಿಸಿದ್ದರ ಬಗ್ಗೆ ಪ್ರಸ್ತಾಪಿಸಿದರು. ನಂತರ ಮಾತನಾಡುತ್ತಾ, ಸರ್ಕಾರವು ಕಾರ್ಪೋರೇಟ್ (ಖಾಸಗಿ ಕಂಪನಿ)ಗಳ ಶೈಲಿಯಲ್ಲಿ ಕಾರ್ಯನಿರ್ವಹಿಸಬೇಕು. ಈ ನಿಟ್ಟಿನಲ್ಲಿ ಸರ್ಕಾರದ ಎಲ್ಲಾ ಅಧಿಕಾರಿಗಳ ಸಹಕಾರ ಬಯಸುವುದಾಗಿ ತಿಳಿಸಿದರು. ಕೇಂದ್ರ ಸರ್ಕಾರದಿಂದ ನೀಡುತ್ತಿರುವ ಆರ್ಥಿಕ ಸೌಲಭ್ಯವನ್ನು ಕಾಲಕಾಲಕ್ಕೆ ಯಾವ ರೀತಿಯಲ್ಲಿ ಸದ್ಬಳಕೆ ಮಾಡಿಕೊಳ್ಳಬೇಕೆಂದು ತಿಳಿಸಿದರು. ತಮ್ಮ-ತಮ್ಮ ಇಲಾಖೆಗಳಿಗೆ ಸಂಬಂಧಿಸಿದಂತೆ ಯಾವ ರೀತಿಯಲ್ಲಿ ಅಧಿಕಾರಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕೆಂದು ತಿಳಿಸಿದರು. ಇವತ್ತಿನ ದಿನಗಳಲ್ಲಿ ಸರ್ಕಾರದಿಂದ ಜನತೆ ಬಯಸುವುದು ನೀರಿನ ಸೌಲಭ್ಯ, ವಸತಿ ಸೌಲಭ್ಯ, ಆರೋಗ್ಯ ಸೌಲಭ್ಯ ಮತ್ತು ಶಿಕ್ಷಣ ಇವುಗಳಿಗೆ ಅನುಕೂಲವಾಗುವ ರೀತಿಯಲ್ಲಿ ಕಾರ್ಯಕ್ರಮಗಳಿರಬೇಕೆಂದು ತಿಳಿಸಿದರು. ಅಲ್ಲದೇ ಉದ್ಯೋಗಗಳನ್ನು ಸೃಷ್ಟಿ ಮಾಡಲು

ಯಾವ ಯಾವ ಇಲಾಖೆಯಲ್ಲಿ ಸಾಧ್ಯವಿದೆಯೋ ಆ ಇಲಾಖೆಯ ಸಹಕಾರ ನೀಡಬೇಕೆಂದು ಕೋರಿದರು. ಅಲ್ಲದೇ ಜನತಾ ದರ್ಶನಕ್ಕೆ ಇತ್ತೀಚಿನ ದಿನಗಳಲ್ಲಿ ಜನಸಾಮಾನ್ಯರು ಹೆಚ್ಚು-ಹೆಚ್ಚು ಸಂಖ್ಯೆಯಲ್ಲಿ ತಮ್ಮ ಅಹವಾಲುಗಳನ್ನು ತೆಗೆದುಕೊಂಡು ಬರುತ್ತಿರುವುದಕ್ಕೆ ಮೂಲ ಕಾರಣ ತಮ್ಮ ತಾಲ್ಲೂಕು ಹಾಗೂ ಜಿಲ್ಲಾ ಕೇಂದ್ರಗಳಲ್ಲಿ ಅಧಿಕಾರಿಗಳು ಅವರುಗಳಿಗೆ ಸರಿಯಾಗಿ ಸ್ಪಂದಿಸುತ್ತಿಲ್ಲ ಎಂದು ತಿಳಿಸಿದರು. ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಜಿಲ್ಲಾಧಿಕಾರಿಗಳು ಪ್ರಮುಖವಾಗಿ ಈ ವಿಷಯದ ಕುರಿತು ಗಮನಹರಿಸಬೇಕೆಂದು ಸೂಚಿಸಿದರು. ಜನತಾ ದರ್ಶನದಲ್ಲಿನ ಹೆಚ್ಚಿನ ಅರ್ಜಿಗಳು ಉದ್ಯೋಗ, ಶಿಕ್ಷಣ ಕ್ಷೇತ್ರ, ಹಾಗೂ ವಿಕಲಚೇತನರ ಸಮಸ್ಯೆಗಳಿಗೆ ಸಂಬಂಧಿಸಿದ್ದಾಗಿದ್ದು, ಇಂತಹ ವಿಷಯಗಳಲ್ಲಿ ಹೆಚ್ಚಿನ ಆಸಕ್ತಿ ತೋರಿಸಿದರೆ ಸರ್ಕಾರವು ಹೆಚ್ಚಿನ ಸಹಕಾರ ನೀಡುವುದಾಗಿ ತಿಳಿಸಿದರು. ಒಳ್ಳೆಯ ಅಧಿಕಾರಿಗಳಿಗೆ ರಕ್ಷಣೆ ನೀಡುವುದು ಸರ್ಕಾರದ ಕರ್ತವ್ಯ. ಅಂತಹ ಅಧಿಕಾರಿಗಳಿಗೆ ಯಾವುದೇ ಸಮಸ್ಯೆಗಳು ಉಂಟಾದಲ್ಲಿ ಸೂಕ್ತ ರಕ್ಷಣೆ ನೀಡುವಲ್ಲಿ ತಮ್ಮ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು.

ಶಿಕ್ಷಣ ಹಕ್ಕು ಕಾಯ್ದೆ ಬಗ್ಗೆ ಪ್ರಸ್ತಾಪಿಸುತ್ತಾ, ಈ ಕಾಯ್ದೆಯು ಜನಸಾಮಾನ್ಯರಿಗೆ ಅನುಕೂಲವಾಗುತ್ತಿಲ್ಲ. ಸರ್ಕಾರದಿಂದ ಸುಮಾರು 600 – 700 ಕೋಟಿಗಳಷ್ಟು ಮೊತ್ತವನ್ನು ಖಾಸಗಿ ಶಾಲೆಗಳಿಗೆ ನೀಡುತ್ತಿದ್ದರೂ, ಜನಸಾಮಾನ್ಯರಿಂದಲೂ ಸಹ ಹೆಚ್ಚಿನ ಹಣವನ್ನು ವಸೂಲು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಾಗಿ ತಿಳಿಸಿದರು. ಶಿಕ್ಷಣ ಇಲಾಖೆಯ ಡಿಡಿಪಿಐ ಹಾಗೂ ಬಿಇಓಗಳು ತಪ್ಪು ಹಾದಿಯನ್ನು ತುಳಿದು ಖಾಸಗಿ ಶಾಲೆಗಳ ಜೊತೆ ಶಾಮೀಲಾಗಿರುವುದಾಗಿ ತಿಳಿಸಿದರು. ಈ ಬಗ್ಗೆ ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಬೇಕೆಂದು ಸೂಚಿಸಿದರು. ಸರ್ಕಾರಿ ಶಾಲೆಗಳನ್ನು ಖಾಸಗಿ ಶಾಲೆಗಳಿಗೆ ಸರಿಸಮನಾಗಿ ಮಾಡಲು ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸುವುದು ಅನಿವಾರ್ಯವೆಂದು ಹೇಳಿದರು.

ಕೇಂದ್ರ ಸರ್ಕಾರದಿಂದ ಆಯೋಜಿಸಲ್ಪಡುವ ಉದ್ಯೋಗ ಮೇಳದಲ್ಲಿ ತಾಲ್ಲೂಕು ಮಟ್ಟಕ್ಕೆ 50.00ಲಕ್ಷ ರೂಪಾಯಿ, ಪ್ರಾದೇಶಿಕ ಮಟ್ಟಕ್ಕೆ 75.00 ಲಕ್ಷ ರೂಪಾಯಿ, ರಾಜ್ಯ ಮಟ್ಟಕ್ಕೆ 1.00 ಕೋಟಿ ರೂಪಾಯಿ ಮೀಸಲಿಟ್ಟಿರುವುದಾಗಿ ತಿಳಿಸಿದರು. ಆದರೆ ಇದರಿಂದಾಗುವ ಪ್ರಯೋಜನದ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಸಂಬಂಧಪಟ್ಟ ಇಲಾಖೆಯವರು ನೀಡಬೇಕೆಂದು ಸೂಚಿಸಿದರು. ಉದ್ಯೋಗ ಮೇಳದಲ್ಲಿ ಉದ್ಯೋಗ ಸೃಷ್ಟಿಸುವಲ್ಲಿ ಖಾಸಗಿ ಕಾರ್ಖಾನೆಯವರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವಂತೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಸೂಚಿಸುವಂತೆ ತಿಳಿಸಿದರು. ಈ ಮೇಳದ ಯಶಸ್ಸಿಗೆ ಎಲ್ಲಾ ಇಲಾಖೆಗಳ ಸಹಕಾರ ನೀಡಬೇಕೆಂದು ತಿಳಿಸಿದರು. ಪ್ರತಿ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಪೋಲೀಸ್ ವರಿಷ್ಠಾಧಿಕಾರಿಗಳು, ವಾಣಿಜ್ಯ ಇಲಾಖೆಯ ಅಧಿಕಾರಿಗಳು, ಅಂಗವಿಕಲ ಕಲ್ಯಾಣ ಇಲಾಖೆಯ ಅಧಿಕಾರಿಗಳು ಆಯಾ ಜಿಲ್ಲೆಯಲ್ಲಿ ಒಂದು ಸಮಿತಿ ರಚನೆ ಮಾಡಿ ಸಂಬಂಧಪಟ್ಟ ಕಾರ್ಖಾನೆಯ ಮಾಲೀಕರನ್ನು ವಿಶ್ವಾಸಕ್ಕೆ

(77)

ತೆಗೆದುಕೊಳ್ಳಬೇಕೆಂದು ಹೇಳಿದರು. ಪ್ರತಿ 15 ದಿನಗಳಿಗೊಮ್ಮೆ ಖಾಲಿ ಹುದ್ದೆಗಳ ನೋಂದಣಿ ಮಾಡಿಸಬೇಕೆಂದು, ಕೌಶಲ್ಯರಹಿತ ಉದ್ಯೋಗಾಂಕ್ಷಿಗಳಿಗೆ ತರಬೇತಿ ನೀಡಲು ಒಂದು ಹೊಸ ಯೋಜನೆಯನ್ನು ಜಾರಿಗೆ ತರಬೇಕೆಂದು ಹೇಳಿದರು. ಉದ್ಯೋಗಾಧಾರಿತ ಸಮಸ್ಯೆಗಳಿಗೆ ಆದ್ಯತೆ ನೀಡಬೇಕೆಂದು ತಿಳಿಸಿದರು.

ವಸತಿ ಯೋಜನೆ ಬಗ್ಗೆ ಪ್ರಸ್ತಾಪಿಸುತ್ತಾ, ಕೇಂದ್ರ ಸರ್ಕಾರವು 2022ರೊಳಗೆ ಪ್ರತಿಯೊಬ್ಬರಿಗೆ ಒಂದು ಮನೆಯನ್ನು ನೀಡುವ ಯೋಜನೆಯನ್ನು ತರುವುದಾಗಿ ಘೋಷಣೆ ಮಾಡಿರುವುದಾಗಿ ತಿಳಿಸಿದರು. ಪ್ರತಿ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಒಂದು ಅಥವಾ ಎರಡು ತಿಂಗಳುಗಳ ಸಮಯವನ್ನು ನೀಡುವುದಾಗಿ, ಈ ಸಮಯದಲ್ಲಿ ಅವರು ಆಯಾ ಜಿಲ್ಲೆಗಳಲ್ಲಿ ಇರುವ ಭೂಮಿಯ ಲಭ್ಯತೆಯ ಬಗ್ಗೆ ಮಾಹಿತಿಯನ್ನು ಪಡೆಯಬೇಕೆಂದು ಸೂಚಿಸಿದರು. ಫಲಾನುಭವಿಗಳಿಗೆ ಸರ್ಕಾರದ ಮುಖಾಂತರವೇ ಹಣ ಹೊಂದಾಣಿಕೆ ಮಾಡಲು ಹಾಗೂ ಮುಂದಿನ 05 ವರ್ಷಗಳಲ್ಲಿ ನಗರ ಪ್ರದೇಶಗಳಲ್ಲಿ ಭೂಮಿಯ ಲಭ್ಯತೆ ಮೇರೆಗೆ 5 ಲಕ್ಷ ಮನೆಗಳನ್ನು ನಿರ್ಮಿಸುವ ಗುರಿ ಹೊಂದಲಾಗಿದ್ದು, ಈ ವಿಷಯಕ್ಕೆ ಸಂಬಂಧಪಟ್ಟ ಹಾಗೆ ಒಂದು ಕಾರ್ಯಕ್ರಮವನ್ನು ರೂಪಿಸಬೇಕಾಗಿದೆ ಎಂದು ತಿಳಿಸಿದರು.

ಕಂದಾಯ ಇಲಾಖೆಗೆ ಸಂಬಂಧಪಟ್ಟಂತೆ ತಾಲ್ಲೂಕು ತಹಶೀಲ್ದಾರ್ ಕಛೇರಿಗಳಲ್ಲಿ ಖಾತೆ / ಪಹಣಿ ಮಾಡಿಕೊಡಲು 3-4 ತಿಂಗಳುಗಳ ದೀರ್ಘ ಸಮಯ ತೆಗೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಇದಕ್ಕೆ ಒಂದು ಸಮಯದ ಮಿತಿಯನ್ನು ರೂಪಿಸಿ ಬಡ ರೈತರು ಈ ಸೌಲಭ್ಯಗಳಿಗೆ ಅಲೆಯುವುದನ್ನು ತಪ್ಪಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

ನಂತರ ಮಾತನಾಡುತ್ತಾ, ಅಧಿಕಾರಿಗಳನ್ನು ಉದ್ದೇಶಿಸಿ ತಮಗೆ ಯಾವುದೇ ರೀತಿಯ ಸಮಸ್ಯೆಗಳ ಕುರಿತು ಮುಕ್ತವಾಗಿ ಚರ್ಚಿಸಿದಲ್ಲಿ ಅದನ್ನು ಪರಿಹರಿಸುವುದಾಗಿ ಭರವಸೆ ನೀಡಿದರು. ಇವತ್ತಿನ ದಿನ ಆರೋಗ್ಯ, ಶಿಕ್ಷಣ ಕ್ಷೇತ್ರದಲ್ಲಿ ಪರಿಣಾಮಕಾರಿಯಾಗಿ ಕೆಲಸ ಮಾಡಬೇಕಾಗಿರುವುದರಿಂದ ತಮ್ಮ-ತಮ್ಮ ಅಭಿಪ್ರಾಯಗಳನ್ನು ಮುಕ್ತವಾಗಿ ಹಂಚಿಕೊಳ್ಳುವಂತೆ ತಿಳಿಸಿದರು. ಜನ ಸಾಮಾನ್ಯರಿಗೆ ಅನುಕೂಲವಾಗುವಂತಹ ಕಾರ್ಯಕ್ರಮಗಳನ್ನು ಜಾರಿಗೆ ತರುವಲ್ಲಿ ತಮ್ಮ ಸಹಕಾರಬೇಕೆಂದು ಕೋರಿದರು.

ಮುಂದುವರೆದು, ಮಾನ್ಯ ಉಪಮುಖ್ಯಮಂತ್ರಿಯವರು ಸಭೆಯಲ್ಲಿ ಹಾಜರಿದ್ದ ಸನ್ಮಾನ್ಯ ಮುಖ್ಯಮಂತ್ರಿ ಹಾಗೂ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಹಾಗೂ ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಸ್ವಾಗತಿಸಿದರು. ಸರ್ಕಾರದ ಉದ್ದೇಶ ರಾಜ್ಯದ ಜನತೆಗೆ ಒಂದು ಒಳ್ಳೆಯ ಆಡಳಿತ ನೀಡಬೇಕೆಂಬುದಾಗಿ ತಿಳಿಸುತ್ತಾ, ಇನ್ನು ಕೆಲವೇ ದಿನಗಳಲ್ಲಿ ನಮ್ಮ

ಸರ್ಕಾರದ ಆದ್ಯತೆಗಳೇನು ಎಂಬುದರ ಬಗ್ಗೆ ಜನತೆಗೆ ತಿಳಿಸಲು ಒಂದು Common Minimum Program ನಡೆಸುವುದಾಗಿ ತಿಳಿಸಿದರು. ಬೇರೆ ರಾಜ್ಯಕ್ಕೆ ಹೋಲಿಸಿದರೆ ಕರ್ನಾಟಕ ರಾಜ್ಯದ ಅಧಿಕಾರಿಗಳು ಒಳ್ಳೆಯ ರೀತಿಯಲ್ಲಿ ಕೆಲಸ ನಿರ್ವಹಿಸುತ್ತಿರುವುದಾಗಿ ತಿಳಿಸಿದರು. ಒಳ್ಳೆಯ ಆಡಳಿತ ಎಂದರೆ ಜನಸಾಮಾನ್ಯರಿಗೆ ಯಾವುದೇ ತೊಂದರೆ ಆಗದಂತೆ ಕಡಿಮೆ ಅವಧಿಯಲ್ಲಿ ಅವರ ಕೆಲಸಗಳನ್ನು ಮಾಡಿಕೊಡುವುದು ಎಂದು ತಿಳಿಸಿದರು. ಈ ಸರ್ಕಾರ ಅಭಿವೃದ್ಧಿ ಪರ ಇರುವಂತಹ ಸರ್ಕಾರ. ರೈತರಿಗೆ ಕೂಲಿ ಕಾರ್ಮಿಕರಿಗೆ, ವಿದ್ಯಾರ್ಥಿಗಳಿಗೆ ಸರ್ಕಾರ ಅನುಕೂಲ ಮಾಡಿಕೊಡುತ್ತದೆ. ಕೃಷಿ ಕ್ಷೇತ್ರವು ರಾಜ್ಯದ ಆದಾಯದ ಪ್ರಮುಖ ಮೂಲವಾಗಿದ್ದು, ಅದನ್ನು ಸದೃಢಗೊಳಿಸಬೇಕೆಂದು ತಿಳಿಸಿದರು. ದೇಶದಲ್ಲಿಯೇ ಪ್ರಥಮಬಾರಿಗೆ ಎಪಿಎಂಸಿಗಳನ್ನು ಆನ್‌ಲೈನ್ ಮಾಡಿದ್ದು, ರೈತರಿಗೆ ಅನುಕೂಲವಾಗುತ್ತಿದೆ ಎಂದರು. ಇದನ್ನು ಸದೃಢಗೊಳಿಸದಿದ್ದರೆ ರೈತರಿಗೆ ಅನಾನುಕೂಲವಾಗಿ ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ಎದುರಾಗುತ್ತದೆ ಎಂದು ತಿಳಿಸಿದರು. ಆದ್ದರಿಂದ ಕೃಷಿ ಇಲಾಖೆಯ ಅಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ ಈ ನಿಟ್ಟಿನಲ್ಲಿ ಹೆಚ್ಚಿನ ಗಮನ ಹರಿಸಬೇಕೆಂದು ತಿಳಿಸಿದರು.

ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದು, ಸರ್ಕಾರಿ ಶಾಲೆಗಳ ಸ್ಥಿತಿಗತಿಯ ಬಗ್ಗೆ ತಿಳಿಸಿದರು. 1986ರಲ್ಲಿ ರಾಜೀವ್ ಗಾಂಧಿಯವರು ಶಿಕ್ಷಣ ಕ್ಷೇತ್ರಕ್ಕೆ ಆದ್ಯತೆಯನ್ನು ನೀಡಿದ್ದರು. ಶಿಕ್ಷಣ ಅಭಿಯಾನಗಳಿಗೆ ಸಾವಿರಾರು ಕೋಟಿಗಳನ್ನು ಖರ್ಚು ಮಾಡಿದ್ದರೂ ಅವುಗಳು ಇನ್ನೂ ಅಭಿವೃದ್ಧಿಯಾಗಿರುವುದಿಲ್ಲ ಎಂದು ತಿಳಿಸಿದರು. ಶಿಕ್ಷಣ ಸಚಿವರಾದಂತಹ ಶ್ರೀ ಎನ್. ಮಹೇಶ್‌ರವರು ಸಾವಿರಾರು ಸರ್ಕಾರಿ ಶಾಲೆಗಳನ್ನು ಮುಚ್ಚುವ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾಪಿಸಿರುವುದಾಗಿ ತಿಳಿಸಿದರು. ಆ ಶಾಲೆಗಳಲ್ಲಿ ಮೂಲಭೂತ ಸೌಕರ್ಯ ಹಾಗೂ ಉತ್ತಮ ಶಿಕ್ಷಕರುಗಳಿದ್ದರೂ ಸಹ ವಿದ್ಯಾರ್ಥಿಗಳ ಕೊರತೆಯಿದ್ದು, ಪ್ರತಿ ತಾಲ್ಲೂಕು ಕೇಂದ್ರಗಳಲ್ಲಿ ಖಾಸಗಿ ಶಾಲೆಗಳನ್ನು ಪ್ರಾರಂಭಿಸಿರುವುದು ಇದಕ್ಕೆ ಕಾರಣ ಎಂದರು. ಸರ್ಕಾರಿ ಶಾಲೆಗಳಲ್ಲಿ ಶೈಕ್ಷಣಿಕ ಗುಣಮಟ್ಟವನ್ನು ಹೆಚ್ಚಿಸಬೇಕು ಎಂದರು.

ಇನ್ನು ಸರ್ಕಾರಿ ಆಸ್ಪತ್ರೆಗಳ ಪರಿಸ್ಥಿತಿಯ ಬಗ್ಗೆ ಮಾತನಾಡುತ್ತಾ, ಸರ್ಕಾರಿ ಆಸ್ಪತ್ರೆಗಳನ್ನು ಬಲಪಡಿಸಬೇಕೆಂದು ತಿಳಿಸಿದರು. ಇಂತಹ ಕೆಲವು ಸಮಸ್ಯೆಗಳನ್ನು ಸರಿಪಡಿಸುವುದೇ ಒಳ್ಳೆಯ ಆಡಳಿತ ಎಂದರು. ಕರ್ನಾಟಕ ರಾಜ್ಯವು ಅಭಿವೃದ್ಧಿ ಹೊಂದಿರುವ ರಾಜ್ಯವಾಗಿದ್ದು, ನಾವೆಲ್ಲರೂ ಒಂದು ಕುಟುಂಬದ ರೀತಿಯಲ್ಲಿ ಕೆಲಸ ಮಾಡಬೇಕೆಂದು ಅಧಿಕಾರಿಗಳಿಗೆ ತಿಳಿಸಿದರು. ಮುಂದಿನ ದಿನಗಳಲ್ಲಿ ಹೆಚ್ಚಿನ ಮಳೆಬರುವ ಸಂಭವವಿದ್ದು, ಅದಕ್ಕಾಗಿ ತಯಾರಿರಬೇಕೆಂದು ತಿಳಿಸಿದರು. ಪ್ರತಿ ಜಿಲ್ಲೆಯಲ್ಲಿಯೂ ಪ್ರಕೃತಿ ವಿಕೋಪ ಪರಿಹಾರಕ್ಕೆ ಯುನಿಟ್‌ಗಳನ್ನು ಸ್ಥಾಪಿಸಿದರೆ ಅನುಕೂಲವಾಗುತ್ತದೆ ಎಂದರು. ಇದಕ್ಕೆ ಶಾಶ್ವತ ಪರಿಹಾರಗಳನ್ನು ಕಲ್ಪಿಸಬೇಕೆಂದು ಸೂಚಿಸಿದರು.

ಹಿಂದಿನ ಸರ್ಕಾರದಲ್ಲಿ ಸುಮಾರು 5 ಲಕ್ಷ ಯುವಕರಿಗೆ ಕೌಶಲಾಭಿವೃದ್ಧಿ ತರಬೇತಿಗಳನ್ನು
ನೀಡಿರುವುದಾಗಿ ತಿಳಿಸಿದರು. ಕಾರ್ಖಾನೆಗಳಿಗೆ ಸಂಬಂಧಪಟ್ಟ ಕೌಶಲ್ಯಗಳು ಪಠ್ಯಪುಸ್ತಕಕ್ಕಿಂತ
ಭಿನ್ನವಾಗಿದ್ದು, ಆ ಸಂಬಂಧ ತರಬೇತಿಯನ್ನು ಸೂಚಿಸಿದರು. ರೈತರಿಗೆ ಅನುಕೂಲವಾಗುವಂತೆ
"ಭೂಮಿ" ಕಾರ್ಯಕ್ರಮವನ್ನು ಆಯೋಜಿಸಿದ್ದು, ಅದಕ್ಕೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಪ್ರಶಂಸೆ
ದೊರೆತಿರುವುದಾಗಿ ತಿಳಿಸಿದರು. ಆಯಾ ಜಿಲ್ಲೆಗಳ ಆಡಳಿತ ಸುಸೂತ್ರವಾಗಿ ನಡೆಯಲು ಸರ್ಕಾರದ
ಮುಖ್ಯ ಕಾರ್ಯದರ್ಶಿಯವರ ಸೂಚನೆ ಮೇರೆಗೆ ಇಲಾಖಾ ಅಧಿಕಾರಿಗಳು ಕಾರ್ಯನಿರ್ವಹಿಸಲು
ಸೂಚಿಸಿದರು. ಯೋಜನೆಗಳಿಗೆ ಬಿಡುಗಡೆಯಾಗುವ ಹಣವನ್ನು ವರ್ಷಪೂರ್ತಿ ಸಮರ್ಪಕವಾಗಿ
ಬಳಸುವಂತೆ ಸೂಚಿಸಿದರು. ಪ್ರತಿ ಜಿಲ್ಲೆಗಳ ಆಡಳಿತವನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಹಾಗೂ
ನೋಡಲ್ ಅಧಿಕಾರಿಗಳು ಸೂಕ್ಷ್ಮವಾಗಿ ಗಮನಿಸುವಂತೆ ಸೂಚಿಸಿದರು. ಎಲ್ಲಾ ಅಧಿಕಾರಿಗಳು
ಮಾಡುವ ಕೆಲಸವನ್ನು ಸೂಕ್ಷ್ಮವಾಗಿ ಗಮನಿಸುವುದಾಗಿ ಹೇಳಿ ತಮ್ಮ ಮಾತುಗಳನ್ನು ಮುಗಿಸಿದರು.

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಇವರು
ಮಾತನಾಡುತ್ತಾ, ಸಭೆಯ ಪ್ರಮುಖ ವಿಷಯವಾದ ರಾಜ್ಯದ ಪ್ರಸ್ತುತ ಹವಾಮಾನ ಪರಿಸ್ಥಿತಿ, ಬೆಳೆ
ಪರಿಸ್ಥಿತಿ, ಕುಡಿಯುವ ನೀರಿನ ಸರಬರಾಜು ಹಾಗೂ ಮಳೆಹಾನಿ ಬಗ್ಗೆ ಪ್ರಾತ್ಯಕ್ಷಿಕೆ ಮೂಲಕ
ವಿವರಿಸಿದರು. 11ನೇ ತಾರೀಖಿನಂದು ಕಂದಾಯ ಸಚಿವರು ರಾಜ್ಯದ ಹವಾಮಾನ ಪರಿಸ್ಥಿತಿಯ ಬಗ್ಗೆ
ಪರಿಶೀಲನೆ ನಡೆಸಿದ್ದಾರೆ. 12ನೇ ತಾರೀಖಿನಂದು ಬೆಳಗಾಂ ಜಿಲ್ಲೆಯಲ್ಲಿ ಸಭೆ ನಡೆಸಿದ್ದೇವೆ.
Karnataka Institute of Natural Disaster Management ರವರು ನೀಡಿರುವ ವರದಿಯ
ಪ್ರಕಾರ ನಾವು Drought Memorandum & flood Memorandum ನ್ನು ತಯಾರಿಸಿದ
ಮೇಲೆ ನಮಗೆ ಬೇಕಾದ ಅನುದಾನವು ಸಿಗುತ್ತಿದೆ ಎಂದರು. 1ನೇ ಮಾರ್ಚ್‌ಯಿಂದ 31ನೇ ಮೇ
ವರೆಗೆ 24 ಜಿಲ್ಲೆಗಳಲ್ಲಿ ಅಗತ್ಯಕ್ಕಿಂತ ಹೆಚ್ಚಿನ ಮಳೆಯಾಗಿದೆ. 5 ಜಿಲ್ಲೆಗಳಲ್ಲಿ ಸಾಮಾನ್ಯ ಸ್ಥಿತಿಯ
ಮಳೆಯಾಗಿದೆ. ರಾಯಚೂರು ಜಿಲ್ಲೆಯಲ್ಲಿ ಮಾತ್ರ ಕಡಿಮೆ ಮಳೆಯಾಗಿದೆ. ದಕ್ಷಿಣ ಒಳನಾಡು ಆದ
ಬೆಂಗಳೂರು, ಮಂಗಳೂರು ಹಾಗೂ ಮೈಸೂರಿನಲ್ಲಿ ಶೇಕಡ 60ಕ್ಕಿಂತ ಹೆಚ್ಚು ಮಳೆಯಾಗಿದೆ. ಉತ್ತರ
ಒಳನಾಡು ಆದ ಕಲಬುರ್ಗಿ ಮತ್ತು ಬೆಳಗಾಂ ಕೇಂದ್ರಗಳಲ್ಲಿ ಶೇಕಡ 27ರಷ್ಟು ಮಳೆಯಾಗಿದೆ.
ಮಲೆನಾಡು ಕ್ಷೇತ್ರವಾದ ಶಿವಮೊಗ್ಗ, ಹಾಸನ, ಕೊಡಗು ಮತ್ತು ಶೃಂಗೇರಿಯಲ್ಲಿ ಹೆಚ್ಚಾಗಿ
ಮಳೆಯಾಗುತ್ತಿದೆ. ಕರಾವಳಿಯಲ್ಲೂ ಸಹ ದಿನಾಂಕ:28.05.2018 ಹಾಗೂ 29.05.2018ಗಳಂದು
ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗಿದೆ. ಇದರಿಂದ 105 ಮಾನವ ಜೀವ ಹಾನಿಯಾಗಿದೆ. ಇದಕ್ಕೆ
ಒಂದು ಲಕ್ಷ ಹೆಕ್ಟೇರ್‌ಗೆ ಸರ್ಕಾರ ಪರಿಹಾರ ಘೋಷಣೆ ಮಾಡಿರುವುದಾಗಿ ತಿಳಿಸಿದರು. ಮುಂಗಾರು
ಪೂರ್ವ ಮಳೆ ಇಡೀ ರಾಜ್ಯದಲ್ಲಿ ಶೇಕಡ 54ಕ್ಕಿಂತ ಹೆಚ್ಚಾಗಿದೆ. ಮೂರು ಜಿಲ್ಲೆಗಳಲ್ಲಿ ಜೂನ್-
13ರವರೆಗೆ ಭಾರೀ ಮಳೆ ಉಂಟಾಗಿದೆ. ದಕ್ಷಿಣ ಒಳನಾಡಿನಲ್ಲಿ ಶೇಕಡ 74ಕ್ಕಿಂತ ಹೆಚ್ಚು ಮಳೆಯಾಗಿದೆ.
ರಾಜ್ಯದ 29 ಜಿಲ್ಲೆಗಳಲ್ಲಿ ಸಾಮಾನ್ಯ ಪ್ರಮಾಣಕ್ಕಿಂತ ಹೆಚ್ಚಿನ ಮಳೆಯಾಗಿದೆ. ಮಳೆಯಿಂದಾಗಿ ದಕ್ಷಿಣ
ಕನ್ನಡ, ಬೆಳಗಾಂ, ಉಡುಪಿ, ಧಾರವಾಡ ಈ ಜಿಲ್ಲೆಗಳಿಗೆ ಅಪಾರ ಪ್ರಮಾಣದ ಹಾನಿಯುಂಟಾಗಿದೆ.

ಸರ್ಕಾರದ ವತಿಯಿಂದ ರೈತರಿಗೆ ಎಸ್‌ಎಂಎಸ್ ಅಲರ್ಟ್ ಕಳುಹಿಸುವ ವ್ಯವಸ್ಥೆಯನ್ನು ಮಾಡಿದ್ದೇವೆ. ಈ ಹಾನಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿಯವರ ಪರಿಹಾರ ನಿಧಿಯಿಂದ 24 ಗಂಟೆಯೊಳಗೆ ಪರಿಹಾರ ವಿತರಣೆ ಮಾಡಿರುವುದಾಗಿ ತಿಳಿಸಿದರು. ಈ ಮಳೆಯಿಂದ ಮನೆಗಳಿಗೆ ಹಾನಿ ಉಂಟಾಗಿರುವ ಕುಟುಂಬದವರಿಗೆ ಧನ ಸಹಾಯ ಮಾಡುವುದಕ್ಕಿಂತ ಆಶ್ರಯ ಯೋಜನೆಯಡಿ ಮನೆಯನ್ನು ನೀಡುವುದು ಒಳಿತು ಎಂದು ಮಾನ್ಯ ಮುಖ್ಯಮಂತ್ರಿಯವರು ತಿಳಿಸಿದರು.

ಇಂತಹ ಪ್ರಕರಣಗಳಿಗೆ "ದೇವರಾಜು ಅರಸು" ಯೋಜನೆಯಡಿಯಲ್ಲಿ ವಸತಿ ನೀಡುವ ಸೌಲಭ್ಯವನ್ನು ಕಲ್ಪಿಸಲಾಗಿದ್ದು, ಈ ಬಗ್ಗೆ ತೀರ್ಮಾನ ಕೈಗೊಳ್ಳಲು ಜಿಲ್ಲಾಧಿಕಾರಿಗಳಿಗೆ ಸಂಪೂರ್ಣ ಅಧಿಕಾರ ನೀಡಿರುವುದಾಗಿ ಹಾಗೂ ಈ ಸಂಬಂಧ ಸರ್ಕಾರಿ ಆದೇಶ ಹೊರಡಿಸಿರುವುದಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಸತಿ ಇಲಾಖೆಯವರು ತಿಳಿಸಿದರು.

ಮಳೆಯಿಂದಾಗಿ ರಸ್ತೆಗಳ ದುರಸ್ಥಿಗೆ ಹಳ್ಳಿಗಳಿಗೆ ಒಂದು ಲಕ್ಷ ರೂಪಾಯಿ ಹಾಗೂ ಪಟ್ಟಣ/ನಗರಗಳಿಗೆ ಒಂದುವರೆ ಲಕ್ಷ ರೂಪಾಯಿಗಳನ್ನು ನೀಡಲಾಗುತ್ತದೆ. ಜಿಲ್ಲಾಧಿಕಾರಿಗಳು ಈ ಬಗ್ಗೆ ವರದಿ ತಯಾರಿಸಿ ಸರ್ಕಾರಕ್ಕೆ ಸಲ್ಲಿಸಬೇಕು. ರಾಜ್ಯದ ಪ್ರಕೃತಿ ವಿಕೋಪ ಪರಿಹಾರ ನಿಧಿಗೆ ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ರೂ.5.00ಕೋಟಿಗಳನ್ನು ಮೀಸಲಿಡಲು ಅಭಿವೃದ್ಧಿ ಆಯುಕ್ತರ ಜೊತೆಯಲ್ಲಿ ಆಯೋಜಿಸಲಾಗಿದ್ದ ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದು ತಿಳಿಸಿದರು. ಎಲ್ಲೆಲ್ಲಿ ನೀರಿನ ಕೊರತೆ ಇದೆಯೋ ಅಲ್ಲಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುತ್ತಿರುವುದಾಗಿ ತಿಳಿಸಿದರು. ರಾಜ್ಯದ ಪ್ರತಿಯೊಂದು ಜಿಲ್ಲೆಗಳ ಸಮಗ್ರ ವರದಿಯನ್ನು ಅಂಕಿ-ಅಂಶಗಳ ಸಮೇತ ವಿವರಿಸಿ ಪ್ರಾತ್ಯಕ್ಷಿಕೆಯನ್ನು ಮುಕ್ತಾಯಗೊಳಿಸಿದರು.

ಹವಾಮಾನ ಇಲಾಖೆಯ ಮಳೆಯ ಮುನ್ಸೂಚನೆಯ ಪ್ರಕಾರ ಇನ್ನೂ 2 ದಿನಗಳವರೆಗೂ ಕೊಡಗು, ದಕ್ಷಿಣ ಕನ್ನಡ, ಹಾಸನ, ಮೈಸೂರು ಜಿಲ್ಲೆಯಲ್ಲಿ ಹೆಚ್ಚಿನ ಮಳೆಯಾಗುವ ಸಾಧ್ಯತೆಯಿದೆ. ಅದರ ನಂತರ ಉತ್ತರ ಒಳನಾಡು ಮತ್ತು ದಕ್ಷಿಣ ಒಳನಾಡಿನಲ್ಲಿ ಹೆಚ್ಚಿನ ಮಳೆಯಾಗುವ ಸಾಧ್ಯತೆಯಿರುವುದಿಲ್ಲ. ಮಳೆನಾಡು ಮತ್ತು ಕೋಸ್ಟಲ್‌ನಲ್ಲಿರುವ ಮಳೆಯ ತೀವ್ರತೆ ಕಡಿಮೆಯಾಗುತ್ತದೆ. ಹಿಂದಿನ ಸಾಲಿನಲ್ಲಿ ವೈನಾಡು 56% ಮಳೆಯಾಗಿತ್ತು. ಈ ಸಲ 97% ಮಳೆಯಾಗಿದ್ದು, ಇದೇ ರೀತಿ ಮಳೆಯಾದರೆ ಕಬಿನಿ ಡ್ಯಾಂ ಭರ್ತಿಯಾಗುತ್ತದೆ., ಕೆ.ಆರ್.ಎಸ್ ಡ್ಯಾಂ 90.8 ಅಡಿಯಷ್ಟಿದೆ. ಮಹಾರಾಷ್ಟ್ರದಲ್ಲಿ ಹೆಚ್ಚು ಮಳೆಯಾಗಿಲ್ಲ. ಘಟಪ್ರಭ, ಮಲಪ್ರಭ ಹೆಚ್ಚು ಭರ್ತಿಯಾಗಿಲ್ಲ. ತುಂಗ ಭರ್ತಿಯಾಗಿದ್ದು, ಭದ್ರ ಭರ್ತಿಯಾಗುತ್ತಿದೆ. ಲಿಂಗನಮಕ್ಕಿ ಕೂಡ ಭರ್ತಿಯಾಗುತ್ತಿದೆ ಎಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಇವರು ತಿಳಿಸಿದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಮಾತನಾಡುತ್ತಾ, ಕಳೆದ 3-4 ವರ್ಷಗಳಿಂದ ಬರ ಪರಿಸ್ಥಿತಿ ಇದ್ದ ಕಾರಣ ಎಸ್‌ಡಿಆರ್‌ಎಫ್ ಹಣವನ್ನು ಬೇರೆ ಉದ್ದೇಶಕ್ಕೆ

ಬಿಡುಗಡೆಗೊಳಿಸುತ್ತಿರಲಿಲ್ಲ. ಆದರೆ, ಈ ವರ್ಷ ಬರ ಪರಿಸ್ಥಿತಿ ಇಲ್ಲದಿರುವ ಕಾರಣ ಎಸ್‌ಡಿಆರ್‌ಎಫ್ ಹಣವನ್ನು ಸಾರ್ವಜನಿಕ ಆಸ್ತಿ-ಪಾಸ್ತಿಯ ನಷ್ಟವನ್ನು ಭರಿಸಲು ಉಪಯೋಗಿಸಿಕೊಳ್ಳುವಂತೆ ಸೂಚಿಸಿದರು. ಈ ಬಗ್ಗೆ ಎಲ್ಲಾ ಜಿಲ್ಲಾಧಿಕಾರಿಗಳಿಗೂ ಸ್ಪಷ್ಟ / ಸೂಕ್ತವಾಗಿ ನಿರ್ದೇಶನ ನೀಡಬೇಕೆಂದು ತಿಳಿಸಿದರು. ದಕ್ಷಿಣ ಕನ್ನಡ, ಕೊಡಗು, ಉಡುಪಿ, ಹಾಸನ, ಮೈಸೂರು, ಗದಗ, ಚಿಕ್ಕಮಗಳೂರು, ಬಾಗಲಕೋಟೆ... ಇತ್ಯಾದಿ ಜಿಲ್ಲೆಗಳಲ್ಲಿ ಮಳೆಯಿಂದ ರಸ್ತೆ, ಸೇತುವೆಗಳಿಗೆ ಹಾನಿಯುಂಟಾಗಿದ್ದು, ಅವುಗಳನ್ನು ಸಾರ್ವಜನಿಕರಿಗೆ ಅನುಕೂಲವಾಗುವಂತೆ ತಾತ್ಕಾಲಿಕವಾಗಿ ದುರಸ್ಥಿಗೊಳಿಸಬೇಕೆಂದು ತಿಳಿಸಿದರು.

ಸರ್ಕಾರದ ಕಾರ್ಯದರ್ಶಿಗಳು, ಕೃಷಿ ಮತ್ತು ತೋಟಗಾರಿಕೆ ಇಲಾಖೆ ಇವರು ಹಾಸನ ಜಿಲ್ಲೆಯಲ್ಲಿ 9500 ಹೆಕ್ಟೇರ್‌ನಲ್ಲಿ ಆಲೂಗಡ್ಡೆ ಬಿತ್ತನೆ ಮಾಡಿದ್ದು, 5400 ಹೆಕ್ಟೇರ್ ಆಲೂಗಡ್ಡೆ ಕೊಳೆತುಹೋಗಿದ್ದು, ಇದಕ್ಕೆ ವರದಿಯನ್ನು ಸಲ್ಲಿಸುತ್ತೇವೆ, ನಂತರ ಪರಿಹಾರ ನೀಡುವಂತೆ ಸಭೆಯಲ್ಲಿ ಕೋರಿದರು. ಈ ಸಂಬಂಧ ಕ್ಯಾಬಿನೆಟ್ ಸಬ್ ಕಮಿಟಿಯಲ್ಲಿ ಚರ್ಚಿಸಲು ಕೂಡಲೇ ಸಭೆ ಸೇರಿ ಈ ಕುರಿತು ಚರ್ಚಿಸಬೇಕಾಗಿದ್ದು, ಪ್ರಸ್ತಾವನೆಯನ್ನು ಮಾನ್ಯ ಮುಖ್ಯಮಂತ್ರಿಯವರಿಗೆ ಸಲ್ಲಿಸಬೇಕೆಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ತಿಳಿಸಿದರು.

ಬೆಳಗಾವಿಯಲ್ಲಿ 39 ರೈತರು ಆತ್ಮಹತ್ಯೆ ಮಾಡಿಕೊಂಡಿರುವ ಪ್ರಕರಣಗಳು ವರದಿಯಾಗಿದೆ. ಈ ಬಗ್ಗೆ ಗಮನ ಹರಿಸಿ ಕ್ರಮ ಕೈಗೊಳ್ಳುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆಯ (ವಿಪತ್ತು ನಿರ್ವಹಣೆ) ಇವರು ಕೋರಿದರು. ಅದಕ್ಕೆ ಸಂಬಂಧಿಸಿದಂತೆ ಸರ್ಕಾರದ ಕಾರ್ಯದರ್ಶಿ, ಕೃಷಿ ಮತ್ತು ತೋಟಗಾರಿಕೆ ಇಲಾಖೆ ಇವರು ರೈತರ ಆತ್ಮ ಹತ್ಯೆಗೆ ಸಂಬಂಧಿಸಿದಂತೆ 62 ಪ್ರಕರಣಗಳು ಬಾಕಿಯಿದ್ದು, 49 ಪ್ರಕರಣಗಳ ದಾಖಲಾತಿ ಸಂಬಂಧ ಬಾಕಿಯಿರುತ್ತದೆ. ಚುನಾವಣಾ ಕಾರ್ಯದ ಸಂಬಂಧ ಕೆಲವು ಪ್ರಕರಣಗಳು ಬಾಕಿ ಉಳಿದಿದ್ದು, ಇನ್ನು ಮುಂದೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಮಾನ್ಯ ಮುಖ್ಯಮಂತ್ರಿಗಳು ತಿಳಿಸಿದರು.

ಆರೋಗ್ಯ ಇಲಾಖೆಗೆ ಸಂಬಂಧಿಸಿದಂತೆ ಉತ್ತರ ಕನ್ನಡ ಜಿಲ್ಲೆಯಲ್ಲಿ ರಕ್ತನಿಧಿ ಕೇಂದ್ರದಲ್ಲಿ ರಕ್ತದ ಕೊರತೆಯಿರುವುದಾಗಿ ಪತ್ರಿಕೆಗಳಲ್ಲಿ ಪ್ರಕಟಣೆಗೊಂಡಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳು ಪ್ರಸ್ತಾಪಿಸಿದರು. ಅದಕ್ಕೆ ಸಂಬಂಧಿಸಿದಂತೆ ಬೀದರ್ ಜಿಲ್ಲೆಯಲ್ಲಿ ರಕ್ತನಿಧಿ ಕೊರತೆ ಉಂಟಾಗಿದ್ದು, ಇದನ್ನು ಬೆಂಗಳೂರಿನಿಂದ ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗುವುದು. ರಾಮನಗರ ಜಿಲ್ಲೆಯಲ್ಲಿರುವ ಖಾಸಗಿ ರಕ್ತನಿಧಿ ಕೇಂದ್ರದಿಂದ ಮತ್ತು ಬೆಂಗಳೂರಿನಲ್ಲಿರುವ ರೆಡ್‌ಕ್ರಾಸ್ ಸಂಸ್ಥೆಯಿಂದ ರಕ್ತನಿಧಿ ಕೊರತೆಯಿರುವ ಜಿಲ್ಲೆಗಳಿಗೆ ಸರಬರಾಜು ಮಾಡಲಾಗುವುದು ಎಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯವರು ತಿಳಿಸಿದರು.

ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ರವರು 2013ರಲ್ಲಿ ನ್ಯಾಷನಲ್ ಡಿಸಾಸ್ಟರ್ ರೆಸ್ಪಾನ್ಸ್ ಸೆಂಟರ್ ಬಿಲ್ಡಿಂಗ್‌ಗೆ ಸರ್ಕಾರದಿಂದ ಭೂಮಿ ಮಂಜೂರಾಗಿದ್ದು, ಇದಕ್ಕೆ ರೂ. 6.00 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಲಾಗಿದೆ. ಆದರೂ ಸಹ ಇದುವರೆಗೂ ಭೂಮಿಯನ್ನು ಸದರಿ ಸಂಸ್ಥೆಗೆ ನೀಡಿರುವುದಿಲ್ಲ ವೆಂದು ಸಭೆಯ ಗಮನಕ್ಕೆ ತಂದರು. ಸದರಿ ಸರ್ಕಾರಿ ಭೂಮಿಯು ಸಾರ್ವಜನಿಕರಿಗೆ ಮಂಜೂರಾಗಿರುವ ಬಗ್ಗೆ ದಾವೆ ಹೂಡಿರುವುದರಿಂದ ಪ್ರಕರಣ ಬಾಕಿ ಉಳಿದಿರುತ್ತದೆ ಎಂದು ಆಯುಕ್ತರು, ಭೂಮಾಪನ ಇಲಾಖೆ ಇವರು ತಿಳಿಸಿದರು. ಈ ಸಂಬಂಧ ದಾಖಲಾತಿಗಳನ್ನು ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಮಾನ್ಯ ಮುಖ್ಯಮಂತ್ರಿಗಳು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರಿಗೆ ಸೂಚಿಸಿದರು.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮಳೆಗಾಲಕ್ಕೆ ಸಂಬಂಧಿಸಿದಂತೆ ಸರ್ವೆ ಮಾಡಿ ಬಂದಿದ್ದಲ್ಲಿ, ಅದರ ಮಾಹಿತಿಯನ್ನು ಸಭೆಯಲ್ಲಿ ಪ್ರಸ್ತಾಪಿಸುವಂತೆ ಮಾನ್ಯ ಮುಖ್ಯಮಂತ್ರಿಗಳು ಉಸ್ತುವಾರಿ ಕಾರ್ಯದರ್ಶಿಗಳಿಗೆ ತಿಳಿಸಿದರು.

ವಿಜಯಪುರ ಜಿಲ್ಲೆಗೆ ಸಂಬಂಧಿಸಿದಂತೆ ವಿಜಯಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯವರು 72 ಗ್ರಾಮಗಳಲ್ಲಿ ಕುಡಿಯುವ ನೀರನ್ನು ಟ್ಯಾಂಕರ್‌ಗಳ ಮೂಲಕ ಸರಬರಾಜು ಮಾಡಲಾಗುತ್ತಿದೆ. ಅವಶ್ಯಕತೆ ಕಂಡುಬಂದಲ್ಲಿ ಕುಡಿಯುವ ನೀರನ್ನು ಸರಬರಾಜು ಮಾಡುವಂತೆ ಜಿಲ್ಲಾಧಿಕಾರಿಗಳು ಮತ್ತು ತಹಶೀಲ್ದಾರ್‌ರವರಿಗೆ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಆದೇಶ ನೀಡಿರುವುದಾಗಿ ತಿಳಿಸಿದರು. ಅಂತೆಯೇ, ವಿಜಯಪುರ ಜಿಲ್ಲೆಯಲ್ಲಿ 9 ತಿಂಗಳ ಮಗುವಿನ ಮೇಲೆ ತಗಡಿನ ಶೀಟ್ ಬಿದ್ದು ಮಗು ಮೃತಪಟ್ಟಿರುತ್ತದೆ. ಆದರೆ ಯಾವುದೇ ರೀತ್ಯ ಎಫ್.ಐ.ಆರ್ ದಾಖಲಾಗಿರುವುದಿಲ್ಲ. ಆದರೆ ಮಗುವಿನ ಪಾಲಕರು ಪರಿಹಾರ ನೀಡುವಂತೆ ಕೋರಿದ್ದು, ಇದಕ್ಕೆ ವಿಪತ್ತು ನಿರ್ವಹಣೆ ಪರಿಹಾರ ನಿಧಿಯಡಿಯಲ್ಲಿ ಪರಿಹಾರ ನೀಡಲು ಬರುವುದಿಲ್ಲ ಎಂದು ತಿಳಿಸಿದರು. ಇದಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಮುಖ್ಯಮಂತ್ರಿ ಪರಿಹಾರ ನಿಧಿಯಡಿಯಲ್ಲಿ ಪರಿಹಾರ ನೀಡಲು ಪರಿಶೀಲಿಸಬಹುದೆಂದು ಸಭೆಗೆ ತಿಳಿಸಿದರು.

ಕೊಡಗು ಜಿಲ್ಲೆಯಲ್ಲಿ ಕಳೆದ 3 ದಿನಗಳಲ್ಲಿ ತುಂಬಾ ಮಳೆ ಉಂಟಾಗಿ ಸುಮಾರು ಹಾನಿಯುಂಟಾಗಿದೆ. ಕೇರಳ-ಕರ್ನಾಟಕ ರಾಷ್ಟ್ರೀಯ ಹೆದ್ದಾರಿಯಲ್ಲಿ ಸುಮಾರು 100 ಮರಗಳು ಬಿದ್ದು, ರಸ್ತೆಗಳು ಮುಚ್ಚಿಹೋಗಿದ್ದು, ಅತೀ ಮಳೆಯಿಂದಾಗಿ ಅಂದಾಜು ಮೊತ್ತ ರೂ. 6.50 ಕೋಟಿ ನಷ್ಟ ಉಂಟಾಗಿದೆ ಎಂದು ಜಿಲ್ಲಾಧಿಕಾರಿಗಳು ವರದಿ ನೀಡಿರುತ್ತಾರೆಂದು, ಈ ಸಂಬಂಧ ಪರಿಹಾರಕ್ಕಾಗಿ ವಿಪತ್ತು ನಿರ್ವಹಣೆಯಿಂದ ಹಣ ಮಂಜೂರು ಮಾಡುವಂತೆ ಸರ್ಕಾರದ ಅಪರ ಮುಖ್ಯ

(71)

ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಮತ್ತು ಕೊಡಗು ಜಿಲ್ಲೆ ಉಸ್ತುವಾರಿ ಕಾರ್ಯದರ್ಶಿಗಳು ಕೋರಿದರು.

ಇದೇ ರೀತಿ ಉಳಿದ 7–8 ಜಿಲ್ಲೆಗಳಲ್ಲಿ ಹಾನಿಯುಂಟಾಗಿದ್ದು, ಅದರ ಮಾಹಿತಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಪಡೆಯಲಾಗುತ್ತದೆ. ಅದರಂತೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಮ್ಮ ತಮ್ಮ ಜಿಲ್ಲೆಗಳಲ್ಲಿ ರಸ್ತೆ, ಸೇತುವೆ ಇತ್ಯಾದಿ ಹಾನಿಗಳ ಸಂಬಂಧಿಸಿದಂತೆ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳ ಮುಖಾಂತರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ)ಗೆ ಸಲ್ಲಿಸಿದಲ್ಲಿ ಅದರ ಬಗ್ಗೆ ಪರಿಶೀಲಿಸಲಾಗುವುದೆಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಸಭೆಗೆ ತಿಳಿಸಿದರು.

ರಾಮನಗರ ಜಿಲ್ಲೆಯ ಉಸ್ತುವಾರಿ ಕಾರ್ಯದರ್ಶಿಗಳು ರಾಮನಗರ ಜಿಲ್ಲೆಗೆ ಸಂಬಂಧಿಸಿದಂತೆ ಈ ವರ್ಷ ಮಳೆ ಒಳ್ಳೆಯರೀತಿ ಆಗಿರುವುದರಿಂದ ರಸಗೊಬ್ಬರಗಳು ಇಡೀ ವರ್ಷಕ್ಕೆ ಜಾಸ್ತಿ ಬೇಕಾಗಿಲ್ಲ. ಆದರೆ ಜೂನ್–ಜುಲೈ ಮಾಹೆಯಲ್ಲಿ ಹೆಚ್ಚಿನ ರಸಗೊಬ್ಬರದ ಅವಶ್ಯಕತೆಯಿರುವುದಾಗಿ ಬೇಡಿಕೆಯಿದೆ. ಇದನ್ನು ಕೃಷಿ ಇಲಾಖೆಯವರು ರಸಗೊಬ್ಬರವನ್ನು 6 ತಿಂಗಳು ನೀಡುವುದಾಗಿ ತಿಳಿಸಿದರು. ಇದನ್ನು ಮುಂದುವರಿಸಬೇಕು. ಎರಡನೆಯದಾಗಿ ಸಾಮಾನ್ಯ ಮಳೆಗೆ ಸಂಬಂಧಿಸಿದಂತೆ ಕ್ರಿಯಾ ಯೋಜನೆಯನ್ನು ಇಲಾಖೆಯವರು ತಯಾರಿಸಿದ್ದು, ಒಂದು ವೇಳೆ ಮಳೆ ಕಡಿಮೆಯಾದರೆ ಹೆಚ್ಚುವರಿಯಾಗಿ ಕ್ರಿಯಾ ಯೋಜನೆಯನ್ನು ತಯಾರಿಸಿಟ್ಟುಕೊಂಡಿರಬೇಕೆಂದು ಜಿಲ್ಲಾ ಮಟ್ಟದ ಅಧಿಕಾರಿಗಳು ಕೋರಿರುವುದರಿಂದ, ಹೆಚ್ಚುವರಿ ಕ್ರಿಯಾ ಯೋಜನೆ ತಯಾರಿಸಲು ಕ್ರಮ ಕೈಗೊಳ್ಳುವಂತೆ ಕೋರಿದರು.

ಸರ್ಕಾರದ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ಇವರು ಈ ಬಾರಿ ಮುಂಗಾರು ಮಳೆ ಮುಂಚಿತವಾಗಿ ಆಗಮನವಾಗಿರುವುದರಿಂದ ರಾಜ್ಯದಲ್ಲಿ ಹಸಿರು ಹುಲ್ಲು ಜಾಸ್ತಿಯಾಗಿದ್ದು, ಇದರಿಂದ ಹಾಲಿನ ಉತ್ಪಾದನೆ ಕೂಡ ಜಾಸ್ತಿಯಾಗಿರುತ್ತದೆ. ಇದಕ್ಕೆ 4 ಯೂನಿಯನ್‌ಗಳು ಪ್ರಕ್ಯೂರ್‌ಮೆಂಟ್ ಕಮ್ಮಿ ಮಾಡಿರುತ್ತಾರೆ. ಈ ಸಂಬಂಧ ಬೇರೆ ಸಭೆನಡೆಸಿ ತೀರ್ಮಾನಿಸುವಂತೆ ಕೋರಿದರು.

ಕಾರ್ಯದರ್ಶಿ, ಕೃಷಿ ಮತ್ತು ತೋಟಗಾರಿಕೆ ಇಲಾಖೆ ಇವರು ರಸಗೊಬ್ಬರದ ಬಗ್ಗೆ ಸಭೆಗೆ ಮಾಹಿತಿಯನ್ನು ನೀಡಿರುತ್ತಾರೆ. ಭಾರತ ಸರ್ಕಾರದಿಂದ 50.00 ಲಕ್ಷ ಟನ್ ರಸಗೊಬ್ಬರ ಸರಬರಾಜು ಆಗಿದ್ದು, ಅದರಲ್ಲಿ 7.50% ರಸಗೊಬ್ಬರ ಸರಬರಾಜಾಗಿರುತ್ತದೆ. ಯೂರಿಯಾ ರಸಗೊಬ್ಬರವನ್ನು ಸಹ ಯಾವುದೇ ತೊಂದರೆಯಿಲ್ಲದಂತೆ ಸರಬರಾಜು ಮಾಡುವುದಾಗಿ ಸಭೆಗೆ ತಿಳಿಸಿದರು.

ಯಾದಗಿರಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಯಾದಗಿರಿ ಜಿಲ್ಲೆಯಲ್ಲಿ ಮಂಗಳ ಬ್ರ್ಯಾಂಡ್ ರಸಗೊಬ್ಬರ ಉತ್ಪಾದನೆ ಕೊರತೆಯಿರುತ್ತದೆ. ಇನ್‌ಶ್ಯೂರೆನ್ಸ್ 10% ಟಾರ್ಗೆಟ್ ಆಗಿರುವುದಾಗಿ ತಿಳಿಸಿದರು. ಇನ್ನುಳಿದಂತೆ 2016-17ನೇ ಸಾಲಿನಲ್ಲಿರುವ ಪ್ರಕರಣಗಳು ಇನ್ನು ಇತ್ಯರ್ಥಗೊಂಡಿರುವುದಿಲ್ಲ ಎಂದು ಸಭೆಯ ಗಮನಕ್ಕೆ ತಂದರು. 45 ದಿನಗಳಲ್ಲಿ ರಬಿ ವಿಮಾ ಪ್ರಕರಣಗಳು ಇತ್ಯರ್ಥ ಆಗುತ್ತದೆ. ಮಳೆ ಬಂದ ತಕ್ಷಣ ರೈತರು ವಿಮಾ ಕಟ್ಟಲು ನಿರಾಕರಿಸುತ್ತಾರೆ. ಹಾಸನ ಜಿಲ್ಲೆಯ ವಿಡಿಯೋ ಕಾನ್ಪರೆನ್ಸ್ ಮಾಡಲಾಗಿ ವಿಮಾ ಬಗ್ಗೆ ಕೇಳಿದಾಗ ರೈತರು ಮಳೆ ಬಂದ ತಕ್ಷಣ ವಿಮಾ ಕಟ್ಟಲು ಬರುವುದಿಲ್ಲವೆಂದು ತಿಳಿಸಿದರು. ಬೆಳೆ ವಿಮೆಗೆ ಸಂಬಂಧಿಸಿದಂತೆ ಎಲ್ಲಾ ಕಂಪನಿಗಳಿಗೆ ರೂ. 376.00 ಕೋಟಿ ರಿಲೀಸ್ ಮಾಡಲಾಗಿದೆ. 2016-17 ಕರೀಫ್ ಇತ್ಯರ್ಥ ಆಗಿದೆ. ಈ ವರ್ಷ ಬೆಳೆ ವಿಮೆಯಡಿಯಲ್ಲಿ ಸಾಲ ನವೀಕರಣವಾಗುತ್ತಿಲ್ಲ. ಅದರಿಂದ ರೈತರಿಗೆ ಪ್ರೀಮಿಯಂ ಕಟ್ಟಲು ಕಷ್ಟವಾಗುತ್ತದೆ. ಹೆಸರುಕಾಳು ಮತ್ತು ಉದ್ದಿನಕಾಳಿನ ಬೆಳೆಗಳಿಗೆ ಜೂನ್-ಜುಲೈ ರೊಳಗೆ ಪ್ರೀಮಿಯಂ ಕಟ್ಟಲು ಅವಕಾಶವಿರುವುದಾಗಿ ತಿಳಿಸಿ. ಜುಲೈ ಅಂತ್ಯದೊಳಗಾಗಿ ಗುರಿ ತಲುಪುವುದಾಗಿ ಸಭೆಗೆ ತಿಳಿಸಿದರು.

ದಕ್ಷಿಣ ಕನ್ನಡ ಜಿಲ್ಲೆಯ ಉಸ್ತುವಾರಿ ಕಾರ್ಯದರ್ಶಿಗಳು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅತೀ ಹೆಚ್ಚಿನ ಮಳೆಯಿಂದಾಗಿ ಸಮುದ್ರ ಕೊರೆತ ಇರುತ್ತದೆ. ಈ ವರ್ಷ ಸಮುದ್ರದ ಕೊರೆತ ತೀವ್ರವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ರೂ. 20.00 ಕೋಟಿ ಅನುದಾನವನ್ನು ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿದ್ದಾರೆ. 1 ತಿಂಗಳ ಹಿಂದೆ ಫ್ಲಾಶ್ ಫ್ಲಡ್‌ನಿಂದ ಅರ್ಧ ಗ್ರಾಮ ಮುಳುಗಿ ಹೋಗಿರುವುದರಿಂದ 5 ಸಾ ಕಟರ್, 5 ಬೋಟ್‌ಗಳು ಅವಶ್ಯಕತೆಯಿರುವುದರಿಂದ ಜಿಲ್ಲಾಧಿಕಾರಿಗಳು ಕೋರಿದ್ದು, ಜಿಲ್ಲಾಧಿಕಾರಿಗಳ ಖಾತೆಯಲ್ಲಿ ಅನುದಾನವಿದ್ದು, ಅನುದಾನವನ್ನು ಬಳಸಿಕೊಳ್ಳಲು ಅನುಮತಿ ನೀಡುವಂತೆ ಸಭೆಯಲ್ಲಿ ಕೋರಿದರು. ಡಿ-ವಾಟರ್ ಮತ್ತು ಸಾಮಾಗ್ರಿಗಳಿಗೆ ಸಂಬಂಧಿಸಿದಂತೆ ಪ್ರತಿ ವರ್ಷ ರೂ. 10.00 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.

ಬೆಂಗಳೂರು ನಗರ ಸ್ಥಳೀಯ ಸಂಸ್ಥೆಗಳಾದ ಜಿಗಣಿ, ಆನೇಕಲ್, ಚಂದಾಪುರ, ಬೊಮ್ಮಸಂದ್ರ, ಅತ್ತಿಬೆಲೆ ' ಸೃಜನೆಯಾಗಿದ್ದು, ನೀರಿನ ಸಮಸ್ಯೆ ಉಂಟಾಗಿರುತ್ತದೆ. ಬೋರ್‌ನಲ್ಲೂ ಸಹ ನೀರುಬರುತ್ತಿಲ್ಲ. 4 ವರ್ಷದ ಹಿಂದೆ ಆನೇಕಲ್ ಸಲುವಾಗಿ 2.5 ಎಂ.ಎಲ್.ಡಿ ಕಾವೇರಿ ನೀರು ಕೊಡುವ ತೀರ್ಮಾನವಾಗಿತ್ತು. ಇಲ್ಲಿ ಬೋರ್‌ವೆಲ್ ಕೊರೆದರೂ ಕುಡಿಯುವ ನೀರು ಸಿಗುತ್ತಿಲ್ಲ. ಅದರಂತೆಯೇ, ಆ ಭಾಗದಲ್ಲಿ 146 ವಾರ್ಡ್‌ಗಳಿದ್ದು, ಅದರಲ್ಲಿ ಸುಮಾರು 40 ವಾರ್ಡ್‌ಗಳಿಗೆ ಟ್ಯಾಂಕರ್ ಮುಖಾಂತರ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಆದುದರಿಂದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಮುಖಾಂತರ ಆನೇಕಲ್ ಲೈನ್‌ನಲ್ಲಿ ಕಾವೇರಿ ನೀರನ್ನು ಒದಗಿಸುವಂತೆ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಸಭೆಯಲ್ಲಿ ಕೋರಿದರು.

ಸುಪ್ರೀಂ ಕೋರ್ಟ್ ಆದೇಶದ ಪ್ರಕಾರ ಬೆಂಗಳೂರಿನಲ್ಲಿ 33 ಟಿ.ಎಂ.ಸಿ ಕುಡಿಯುವ ನೀರಿಗಾಗಿ ಉಪಯೋಗಿಸಲಾಗುತ್ತಿದೆ. ಆದರೂ ಕುಡಿಯುವ ನೀರಿನ ಕೊರತೆ ನೀಗಿಸಲು ಕಾವೇರಿ ಪ್ರಾಧಿಕಾರ ಸಭೆಯಲ್ಲಿ ತೀರ್ಮಾನ ಕೈಗೊಳ್ಳಬೇಕಾಗಿರುತ್ತದೆ. ಈ ಹಿಂದೆ ಕರ್ನಾಟಕ ವಸತಿ ಮಂಡಳಿಯಿಂದ 15 ಎಂ.ಎಲ್.ಡಿ ಯೋಜನೆಯಾಗಿತ್ತು. ಅದರಡೂ ಒದಗಿಸಲಾದ ರೂ. 164.00 ಕೋಟಿಗಳಲ್ಲಿ ರೂ. 81.00 ಕೋಟಿಗಳನ್ನು ಸೂರ್ಯ ನಗರಕ್ಕೆ ಒದಗಿಸಲಾಗಿದೆ. ಉಳಿದ ಮೊತ್ತದಲ್ಲಿ ಆನೇಕಲ್ 50% ಮತ್ತು ಉಳಿದ 48 ಹಳ್ಳಿಗಳಿಗೆ 50% ಮೊತ್ತವನ್ನು ಒದಗಿಸಲಾಗಿದೆ. ಸರ್ಕಾರದಿಂದ ಹೆಚ್ಚುವರಿಯಾಗಿ 10 ಟಿ.ಎಂ.ಸಿ ನೀರನ್ನು ಒದಗಿಸಿದ್ದು, ಒಟ್ಟಾರೆ 29 ಟಿ.ಎಂ.ಸಿ ನೀರು ಇರುತ್ತದೆ. ಇದು ಬೆಂಗಳೂರಿನ ಮಹಾನಗರ ಪಾಲಿಕೆಯ ವ್ಯಾಪ್ತಿಯ ಜನಸಂಖ್ಯೆಗೆ ಸರಬರಾಜು ಮಾಡಲು ಸಾಕಾಗುವುದಿಲ್ಲ. ಆದ್ದರಿಂದ ಹೆಚ್ಚುವರಿಯಾಗಿ ನೀರನ್ನು ಒದಗಿಸುವ ಅವಶ್ಯಕತೆ ಇದೆ ಎಂದು ಬಿ.ಡಬ್ಲ್ಯೂ.ಎಸ್.ಎಸ್.ಬಿ ಯ ಅಧಿಕಾರಿಗಳು ತಿಳಿಸಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಮಾತನಾಡುತ್ತಾ, ಈ ಹಿಂದೆ ನಗರ ಸಭೆ ಮತ್ತು ಪುರಸಭೆಗಳಿಗೆ ಕಾವೇರಿ ನೀರನ್ನು ಕೊಡಲಾಗುತ್ತಿದೆ. ರೂ. 1500.00 ಕೋಟಿ ಅನುದಾನದ ಯೋಜನೆಯಡಿ 110 ಹಳ್ಳಿಗಳಿಗೆ ಈಗ ಹೊಸದಾಗಿ ನೀರನ್ನು ಕೊಡಲು ಉದ್ದೇಶಿಸಿದ್ದು, 2 ತಿಂಗಳಿಂದ ನೀರನ್ನು ಒದಗಿಸಲಾಗುತ್ತಿದೆ. ಅದರಲ್ಲಿ ಉಳಿದಂತಹ ನೀರನ್ನು ಬೆಂಗಳೂರು ನಗರದ ಸುತ್ತ-ಮುತ್ತ ಪ್ರದೇಶಗಳಿಗೆ ಸರಬರಾಜು ಮಾಡಲು ಸಾಧ್ಯವಾಗಬಹುದೆಂದು ತಿಳಿಸಿದರು. ಇಲ್ಲದಿದ್ದಲ್ಲಿ ಹೆಚ್ಚುವರಿ ನೀರನ್ನು ಒದಗಿಸುವಂತೆ ಕೋರಬಹುದಾಗಿದೆ ಎಂದು ತಿಳಿಸಿದರು.

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವ ಸಲುವಾಗಿ ಕೌಶಲ್ಯಾಭಿವೃದ್ಧಿ ಯೋಜನೆಯಡಿ ಈಗಾಗಲೇ ಕೌಶಲ್ಯ ತರಬೇತಿಯನ್ನು ನೀಡಲಾಗುತ್ತಿದೆ. ಆದಾಗ್ಯೂ ಗ್ರಾಮೀಣ ಪ್ರದೇಶದ ನಿರುದ್ಯೋಗಿಗಳು ಉದ್ಯೋಗಕ್ಕಾಗಿ ಗ್ರಾಮದಿಂದ ನಗರಕ್ಕೆ ಬಂದು ಇಲ್ಲಿ ಕೆಲಸ ಮಾಡಿ ಬರುವ ಕಡಿಮೆ ಸಂಬಳದಿಂದ ಜೀವನ ನಿರ್ವಹಿಸಲು ತುಂಬಾ ಕಷ್ಟಸಾಧ್ಯವಾಗುತ್ತದೆ. 6024 ಗ್ರಾಮ ಪಂಚಾಯ್ತಿಗಳಲ್ಲಿ ತಲಾ 10 ಗ್ರಾಮಗಳಲ್ಲಿ 20-25 ಕಿ.ಮೀಟರ್‌ಗಳ ಒಳಗೆ ಉದ್ಯೋಗ ವಲಯ ಸ್ಥಾಪಿಸಿ ಉದ್ಯೋಗ ಸೃಷ್ಟಿಸುವ ಕೆಲಸ ಮಾಡಬಹುದು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ "ಮಿಷನ್ ಅಂತ್ಯೋದಯ" ಎನ್ನುವ ಯೋಜನೆಯಿದ್ದು, ಈ ಬಗ್ಗೆ ಚರ್ಚಿಸುವುದಾಗಿ ತಿಳಿಸಿದರು.

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ ಇವರು ಹಿಂದಿನ ಸಾಲಿನಲ್ಲಿ ಖಾಸಗಿ ಶಾಲೆಯನ್ನು ನಿಯಂತ್ರಿಸಲು ಒಂದು ಅಧಿನಿಯಮ ರಚನೆಯಾಗಿದೆ. ಅದರಂತೆ ಜಿಲ್ಲಾಧಿಕಾರಿಗಳಡಿ ಡಿಸ್ಟ್ರಿಕ್ ಎಜುಕೇಷನ್ ರೆಗ್ಯೂಲೇಷನ್ ಅಥಾರಿಟಿ ರಚನೆಯಾಗಿದ್ದು, ಈ ಅಥಾರಿಟಿ ಚುರುಕಾಗಿ

ಕಾರ್ಯನಿರ್ವಹಿಸಬೇಕು. ಪ್ರತಿ ಶನಿವಾರ ಡೇರಾ ಕಮಿಟಿ ಸಭೆ ರಚಿಸಿ, ಪೋಷಕರ ಅಹವಾಲುಗಳನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಬಹುದು ಎಂದು ತಿಳಿಸಿದರು.

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ ಇವರು ಆರ್.ಟಿ.ಇ ಬಗ್ಗೆ ಮಾತನಾಡುತ್ತಾ, ಸಿ.ಇ.ಓ ಜಿಲ್ಲಾ ಪಂಚಾಯತ್ ಸಂಪೂರ್ಣವಾದ ಅಧಿಕಾರ ನೀಡಿದ್ದರೂ ಪೋಷಕರ ಸಮಸ್ಯೆಗಳನ್ನು ನೀಗಿಸುವಲ್ಲಿ ಅಧಿಕಾರಿಗಳು ತಮ್ಮ ಅಧಿಕಾರವನ್ನು ಚಲಾಯಿಸುತ್ತಿಲ್ಲ. ಈ ಸಂಬಂಧ ಮಾನ್ಯಮುಖ್ಯಮಂತ್ರಿಯವರ ಕಾರ್ಯಾಲಯದಿಂದ ಒಂದು ಆದೇಶವನ್ನು ಹೊರಡಿಸಿದಲ್ಲಿ ಅನುಕೂಲವಾಗುತ್ತದೆಂದು ತಿಳಿಸಿದರು. ಅಂತೆಯೇ, ಸರ್ಕಾರಿ ಶಾಲೆಗಳ ಮೂಲಸೌಕರ್ಯಕ್ಕೆ ಸಂಬಂಧಿಸಿದಂತೆ ಮುನ್ಸಿಪಲ್, ಪಂಚಾಯತ್‌ಗಳಲ್ಲಿ ಕ್ರಿಯಾ ಯೋಜನೆಯಲ್ಲಿನ 5 ಮುಖ್ಯ ಕಾರ್ಯಕ್ರಮಗಳಲ್ಲಿ "ಶಿಕ್ಷಣ" ಎನ್ನುವ ಕಾರ್ಯಕ್ರಮವನ್ನು ಸೇರ್ಪಡಿಸಿ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಕ್ರಮ ಕೈಗೊಳ್ಳಬಹುದು. ಸರ್ಕಾರಿ ಶಾಲೆಗಳಿಗೆ ಮಕ್ಕಳು ಬರದಿರಲು ಮುಖ್ಯವಾದ ಕಾರಣ ಎಂದರೆ ಆಂಗ್ಲ ಮಾಧ್ಯಮ. ಈ ಬಗ್ಗೆ ಪಾಲಿಸಿ ಬದಲಾವಣೆಯಾದಲ್ಲಿ ಮಕ್ಕಳು ಶಾಲೆಗಳಿಗೆ ಬರುತ್ತಾರೆ. 10 ವರ್ಷದವರೆಗೆ ಕಡ್ಡಾಯ ಶಿಕ್ಷಣ ಮಾತ್ರ ನೀಡುತ್ತಿದ್ದು, ಸಮಗ್ರ ಶಿಕ್ಷಣ ಅಭಿಯಾನದ ಮಾರ್ಗ ಸೂಚಿಸಯಂತೆ ಮಕ್ಕಳಿಗೆ 6 ಮತ್ತು 8ನೇ ತರಗತಿಯಿಂದಲೇ ಅವರುಗಳ ಕೌಶಲ್ಯಕ್ಕೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ವೃತ್ತಿಪರ ಶಿಕ್ಷಣ ನೀಡುವ ವಿಷಯವನ್ನು ಸೇರ್ಪಡೆಗೊಳಿಸಬಹುದೆಂದು ಸಲಹೆ ನೀಡಿದರು.

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ ಇವರು ಮೂಲಭೂತ ಸೌಕರ್ಯ ಅಭಿವೃದ್ಧಿ ಕೊರತೆ ಮತ್ತು ಶಿಕ್ಷಣದ ಗುಣಮಟ್ಟಕ್ಕೆ ಸಂಬಂಧಿಸಿದಂತೆ ನೀಲಿ ನಕ್ಷೆ ತಯಾರಿಸಲು ಸೂಚಿಸಲಾಗಿದೆ. ನಮ್ಮ ರಾಜ್ಯದಲ್ಲಿ ಒಟ್ಟು ದಾಖಲಾತಿಯ ಅನುಪಾತ 30 ಇದ್ದು, ಉತ್ತರ ಕರ್ನಾಟಕದ ಯಾದಗಿರಿಯಲ್ಲಿ 4 ಇದೆ. ಈ ಬಗ್ಗೆ ಇಂಜಿನಿಯರ್ ಕಾಲೇಜ್ ಮತ್ತು ಪಾಲಿಟೆಕ್ನಿಕ್‌ನ ಪ್ರಾಂಶುಪಾಲರೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಚರ್ಚಿಸಿದ್ದು, ಸಧ್ಯಕ್ಕೆ ನಮ್ಮ ಬಳಿಯಿರುವ ಮೂಲಭೂತ ಸೌಕರ್ಯದನುಸಾರ ಶೇ.20% ರಷ್ಟು ದಾಖಲಿಸಿಕೊಳ್ಳಲು ಸೂಚಿಸಿದೆ. ಮೂಲಭೂತಸೌಕರ್ಯ ಅಭಿವೃದ್ಧಿ ಪಡಿಸಲು ರೂ. 2500 ಕೋಟಿಗಳ ಅವಶ್ಯಕತೆಯಿದ್ದು, ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು. ಅಲ್ಲಿಯವರೆಗೆ ಸ್ಯಾಟ್‌ಲೈಟ್ ಮೂಲಕ 73 ಕಾಲೇಜುಗಳಿಗೆ ನೀಡಲಾಗುತ್ತಿರುವ ವಿದ್ಯಾಭ್ಯಾಸವನ್ನು ಉಳಿದ 412 ಸರ್ಕಾರಿ ಕಾಲೇಜುಗಳಿಗೂ ವಿಸ್ತರಿಸಬಹುದು ಎಂದು ತಿಳಿಸಿದರು. ಕೌಶಲ್ಯ ಹಾಗೂ ಪದವಿ ಶಿಕ್ಷಣವನ್ನು ಜೋಡಿಸುವ ಬಗ್ಗೆ ಚಿಂತನೆ ನಡೆಸುತ್ತಿದ್ದು, ಬಿ.ಎ ಅಥವಾ ಬಿ.ಕಾಂ ಪದವಿಯಂತೆ ಬಿ.ಎ. ಪ್ರೊಫೇಷನಲ್ ಹಾಗೂ ಬಿ.ಕಾಂ ಪ್ರೊಫೇಷನಲ್ ಎಂಬುದಾಗಿ 3–6 ತಿಂಗಳ ಅಲ್ಪಾವಧಿ ಶಿಕ್ಷಣ ಮೂಲಕ ಕೌಶಲ್ಯ ತರಬೇತಿ ನೀಡಬಹುದು ಎಂದು ಅಭಿಪ್ರಾಯಿಸಿದರು.

(67)

ವಸತಿ ಇಲಾಖೆಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ 2 ವರ್ಷದಿಂದ ಪ್ರಧಾನ ಮಂತ್ರಿ ...ವಾಜ್ ಯೋಜನೆಯಡಿ ನಗರ ಪ್ರದೇಶದಲ್ಲಿ 3,40,000 ಮನೆಗಳನ್ನು ನಿರ್ಮಿಸಲು ಉದ್ದೇಶಿಸಿದ್ದು, ...ದಕ್ಕೆ ಕೇಂದ್ರ ಸರ್ಕಾರದಿಂದ ರೂ. 4.60 ಕೋಟಿ ಅನುದಾನ ಒದಗಿಸಿದ್ದು, ಅದರಲ್ಲಿ ಮೊದಲನೇ ...ತಾಗಿ ರೂ. 1300.00 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. ನಗರ ಪ್ರದೇಶದಲ್ಲಿ 5.00 ...ಕ್ಷ ವಸತಿ ಕಲ್ಪಿಸಲು ತಿಳಿಸಿದ್ದು, ಉಳಿದ 2.00 ಲಕ್ಷ ವಸತಿ ಮನೆಗಳನ್ನು ನಿರ್ಮಿಸಲು ಸುಮಾರು ...ಂದಾಜು 20 ಸಾವಿರ ಕೋಟಿ ಅನುದಾನ ಅವಶ್ಯಕತೆಯಿರುತ್ತದೆ. ಇದಕ್ಕೆ ಕಂದಾಯ ಇಲಾಖೆ ಮತ್ತು ನಗರಾಭಿವೃದ್ಧಿ ಇಲಾಖೆ ಮತ್ತು ಆರ್ಥಿಕ ಇಲಾಖೆಯೊಂದಿಗೆ ಸಮನ್ವಯ ಸಭೆ ಜರುಗಿಸಿ ಸೂಕ್ತ ಕ್ರಮ ಕೈಗೊಳ್ಳಬಹುದಾಗಿದೆ. ವಸತಿ ಇಲಾಖೆಯು ಕೌಶಲ್ಯ ಅಭಿವೃದ್ಧಿಯೊಂದಿಗೆ ಸೇರ್ಪಡೆಗೊಂಡಿದ್ದು, ...ರ್ಮಿತಿ ಕೇಂದ್ರದ ಮೂಲಕ 30,000 ಮಂದಿಗೆ ತರಬೇತಿಯನ್ನು ನೀಡಿ, ಕೆಲಸವನ್ನು ನೀಡುತ್ತಿದ್ದೇವೆ. ಮುಂದಿನವರ್ಷ ಇನ್ನು 50,000ಕ್ಕೆ ಹೆಚ್ಚಿಸಲಾಗುವುದೆಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಸತಿ ಇಲಾಖೆರವರು ತಿಳಿಸಿದರು.

ಮುಖ್ಯಮಂತ್ರಿಯವರ ಬಹುಮಹಡಿ ಯೋಜನೆ ಒಂದು ಉತ್ತಮ ಯೋಜನೆಯಾಗಿದ್ದು, ಇದಕ್ಕೆ ಹೆಚ್ಚಿನ ಉತ್ತೇಜನ ನೀಡಿದಲ್ಲಿ ಸರ್ಕಾರಕ್ಕೆ ಒಳ್ಳೆಯ ಹೆಸರು ಬರುತ್ತದೆ. ಈ ಯೋಜನೆಗೆ ಸಂಬಂಧಿಸಿದಂತೆ ಕೆಲಸ ಕಾರ್ಯಗಳನ್ನು ಕೈಗೊಂಡಿದ್ದು, ಗುದ್ದಲಿ ಪೂಜೆ ಮಾತ್ರ ಬಾಕಿಯಿರುತ್ತದೆ. ಮೊದಲನೇ ಹಂತದ ಕೆಲಸ ಸಂಪೂರ್ಣವಾದ ನಂತರ 2ನೇ ಹಂತದ ಬಹುಮಹಡಿ ಯೋಜನೆಗೆ ಅರ್ಜಿಗಳನ್ನು ಕರೆದು ನಂತರ ಕ್ರಮ ಕೈಗೊಳ್ಳಬಹುದಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಮಾನ್ಯ ಮುಖ್ಯಮಂತ್ರಿಯವರಿಗೆ ತಿಳಿಸಿದರು. ಇನ್ನುಳಿದಂತೆ, ಈ ಯೋಜನೆಗೆ ಸಂಬಂಧಿಸಿದಂತೆ ಒಂದು ಸಭೆಯನ್ನು ಕರೆದು ಚರ್ಚಿಸಬಹುದೆಂದು ವಸತಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ತಿಳಿಸಿದರು.

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ ಇವರು ಸೈಟುಗಳು ಮತ್ತು ಜಮೀನುಗಳ ಬಗ್ಗೆ ಮಾಹಿತಿಯನ್ನು ಪಡೆಯಲಾಗುವುದೆಂದು ತಿಳಿಸಿದರು ಹಾಗೂ ಈ ಬಹುಮಹಡಿ ಯೋಜನೆಗೆ ರಾಜೀವ್ ಗಾಂಧಿ ಹೌಸಿಂಗ್ ಕಾರ್ಪೊರೇಷನ್ ಮತ್ತು ಕಂದಾಯ ಇಲಾಖೆಯವರು ಇವರುಗಳು ಸೂಕ್ತವೆಂದು ಪರಿಗಣಿಸಿದ 1.00 ಸಾವಿರ ಎಕರೆ ಭೂಮಿಯನ್ನು ಸಚಿವ ಸಂಪುಟದ ಅನುಮೋದನೆ ಪಡೆದು ಈಗಾಗಲೇ ವಸತಿ ಇಲಾಖೆಗೆ ನೀಡಲಾಗಿದೆ ತಿಳಿಸಿದರು. ಇನ್ನು ಹೆಚ್ಚಿನ ಮಾಹಿತಿಯನ್ನು ಎಲ್ಲಾ ಜಿಲ್ಲೆಗಳಿಂದ ಪಡೆಯುವುದಾಗಿ ಸಭೆಗೆ ತಿಳಿಸಿದರು.

ಮಾನ್ಯ ಮುಖ್ಯಮಂತ್ರಿಯವರು ಮಾತನಾಡುತ್ತಾ, 245 ಲಕ್ಷ ಮನೆಗಳ ಬೇಡಿಕೆಯ ಬಗ್ಗೆ ತಿಳಿದುಬಂದಿರುವ ಬಗ್ಗೆ ವಿಚಾರಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಸತಿ ಇಲಾಖೆ ಇವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗೆ ವಸತಿ ಒದಗಿಸುವ ಕಾರ್ಯವು ಒಂದು ಹಂತವನ್ನು ತಲುಪಿದ್ದು, ಇತರೆ ವರ್ಗದ ಜನರಿಂದ ವಸತಿಗಾಗಿ ಇನ್ನೂ ಹೆಚ್ಚಿನ

ಬೇಡಿಕೆ ಬರುತ್ತಿದೆ. ಈ ಹಿಂದಿನ ಸಾಲಿನಲ್ಲಿ ನಗರ ಪ್ರದೇಶದಲ್ಲಿ ವಾಜಪೇಯಿ ವಸತಿ ಯೋಜನೆ
ಜಾರಿಗೆ ಬಂದಿದ್ದು, ಇದನ್ನು ಜಾರಿಗೊಳಿಸಲು ಭೂಮಿ ಇರಲಿಲ್ಲ. "ಮಾನ್ಯ ಮುಖ್ಯಮಂತ್ರಿಯವರ I
ಲಕ್ಷ ಬಹುಮಹಡಿ ಯೋಜನೆ"ಯಡಿ ವಸತಿ ಕಲ್ಪಿಸಲು ಈಗಾಗಲೇ ಕ್ರಮ ಕೈಗೊಳ್ಳುತ್ತಿದ್ದು ಹಾವೇರಿ,
ಹುಬ್ಬಳ್ಳಿ, ಧಾರವಾಡ, ಜಿಲ್ಲೆಗಳಿಂದಲೂ ಸಹ ಹೆಚ್ಚಿನ ಬೇಡಿಕೆ ಬರುತ್ತಿದೆ.

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ ಇವರು ಮಾತನಾಡುತ್ತಾ, ಅರ್ಹ
ಫಲಾನುಭವಿಗಳಿಗೆ ವಸತಿ ಸೌಲಭ್ಯವು ಸರಿಯಾಗಿ ದೊರಕುತ್ತಿಲ್ಲದ ಕಾರಣ ಈ ಹಿಂದೆ ಹಿಂದುಳಿದ
ವರ್ಗಗಳ ಕಲ್ಯಾಣ ಇಲಾಖೆಯಲ್ಲಿಯ ಸಂಗ್ರಹಿಸಿದ ಜಾತಿ ಜನಗಣತಿಯಲ್ಲಿ ಜನ ಸಾಮಾನ್ಯರ ಎಲ್ಲಾ
ಮಾಹಿತಿಯು ಲಭ್ಯವಿದ್ದು, ಸದರಿ ಮಾಹಿತಿಯನ್ನು ಬಹಳಷ್ಟು ಯೋಜನೆಗಳಿಗೆ
ಉಪಯೋಗಿಸಿಕೊಳ್ಳಬಹುದೆಂದು ಸಲಹೆ ನೀಡಿದರು.

ಕೊಳಚೆ ನಿರ್ಮೂಲನಾ ಮಂಡಳಿಯಲ್ಲಿ 2900 ಅಫೀಷಿಯಲ್ ಸ್ಲಂ ಎಂದು ಆದೇಶವಾಗಿದ್ದು,
ಅದರಲ್ಲಿ 8 ಸಾವಿರ ಎಕರೆ ಭೂಮಿಯಿದ್ದು, ಅದರಲ್ಲಿ 6.5 ಸಾವಿರ ಎಕರೆ ಸರ್ಕಾರಿ ಭೂಮಿಯಲ್ಲಿ
ಸ್ಲಂಗಳಿದ್ದು, ಇನ್ನುಳಿದ 2000 ಎಕರೆ ಭೂಮಿಗೆ ಸಾರ್ವಜನಿಕರು ತಡೆಯಾಜ್ಞೆ ತಂದಿರುತ್ತಾರೆ. ಸದರಿ
6500 ಎಕರೆ ಸ್ಲಂನಲ್ಲಿ ವಾಸಿಸುತ್ತಿರುವವರಿಗೆ ಹಕ್ಕು ಪತ್ರವನ್ನು ನೀಡಲು ಕ್ರಮಕೈಗೊಳ್ಳಬೇಕೆಂದು
ಮಾನ್ಯ ಮುಖ್ಯಮಂತ್ರಿಗಳು ತಿಳಿಸಿದರು.

ಇದಕ್ಕೆ ಪ್ರತಿಕ್ರಿಯಿಸುತ್ತಾ, ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಸತಿ ಇಲಾಖೆ ಇವರು
ಸರ್ಕಾರಿ ಭೂಮಿಯಲ್ಲಿ ಸ್ಥಳೀಯ ಸಂಸ್ಥೆಗಳ ಜಾಗದಲ್ಲಿ ಸುಮಾರು 2.5 ಸಾವಿರ ಎಕರೆ ಭೂಮಿ
ಒತ್ತುವರಿಯಾಗಿದೆ. ಇದನ್ನು ಇದುವರೆಗೂ ಕೊಳಚೆ ಪ್ರದೇಶ ಎಂದು ಘೋಷಣೆ ಮಾಡಿರುವುದಿಲ್ಲ.
ಸುಮಾರು 500-600 ಸಾವಿರ ಎಕರೆ ಖಾಸಗಿ ಭೂಮಿಯಾಗಿದ್ದು, ಕೆಲವು ಪ್ರಕರಣಗಳು
ನ್ಯಾಯಾಲಯದಲ್ಲಿ ಬಾಕಿಯಿರುತ್ತದೆ. ಹಕ್ಕುಪತ್ರ ನೀಡಲು ಸ್ಲಂ ಭೂಮಿ ಬೆಲೆಬಾಳುವುದರಿಂದ
ಆಗಿರುವುದರಿಂದ ಪ್ರಭಾರ ಪತ್ರ ನೀಡುತ್ತಿದ್ದು, ಈ ಬಗ್ಗೆ ಯಾವ ರೀತಿ ಮಾಡಬೇಕೆಂದು
ನಗರಾಭಿವೃದ್ಧಿ ಇಲಾಖೆಯೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಬಹುದೆಂದು ತಿಳಿಸಿದರು.

ಬೆಂಗಳೂರು ರೆವೆನ್ಯೂ ಲೇಔಟ್ ಮತ್ತು ಅಕ್ರಮ ಕಟ್ಟಡಗಳನ್ನು ಸಕ್ರಮಗೊಳಿಸಲು ಪ್ರಕರಣವು
ಸುಪ್ರೀಂ ಕೋರ್ಟ್‌ನಲ್ಲಿ ಇನ್ನೂ ಬಾಕಿ ಇರುತ್ತದೆ. ಇದು ಇತ್ಯರ್ಥಗೊಂಡರೆ ಒಂದು ಸರ್ಕಾರಕ್ಕೆ
ಹೆಸರು ಬರುವ ಜೊತೆಗೆ ರೆವೆನ್ಯೂ ಬರುತ್ತೆ ಇದನ್ನೆ ಬಂಡವಾಳವಾಗಿ ಉಪಯೋಗಿಸಿಕೊಳ್ಳಬಹುದು
ಎಂದು ಗ್ರಾಮೀಣಾಭಿವೃದ್ಧಿ ಸಚಿವರು ತಿಳಿಸಿದರು.

ಸರ್ಕಾರ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಆಡಳಿತ
ಸುಧಾರಣೆ) ಇವರ ವಂದನಾರ್ಪಣೆಯೊಂದಿಗೆ ಸಭೆಯು ಮುಕ್ತಾಯವಾಯಿತು.

(signature)
ಮುಖ್ಯಮಂತ್ರಿಗಳು.

ಸಿಆಸುಇ 01 ಸಕಾಸ 2018